ಕರ್ನಾಟಕ ರಾಜ್ಯಪತ್ರ

ಅಧಿಕೃತವಾಗಿ ಪ್ರಕಟಿಸಲಾದುದು

ವಿಶೇಷ ರಾಜ್ಯ ಪತ್ರಿಕೆ

ಭಾಗ – ೩ Part – III	ಬೆಂಗಳೂರು, ಬುಧವಾರ, ೦೫, ಆಗಸ್ಟ್, ೨೦೨೬ (ಶ್ರಾವಣ, ೧೪, ಶಕವರ್ಷ, ೧೯೪೮) BENGALURU, WEDNESDAY, 05, AUGUST, 2026 (SHRAVANA , 14, SHAKAVARSHA, 1948)	ನಂ. ೫೯೫ No. 595

ಕರ್ನಾಟಕ ಸರ್ಕಾರ

ಸಂಖ್ಯೆ:ನಅಇ 176 ಎಂಎಲ್ಆರ್ 2026(ಇ)

ಕರ್ನಾಟಕ ಸರ್ಕಾರ ಸಚಿವಾಲಯ,
ವಿಕಾಸ ಸೌಧ,
ಬೆಂಗಳೂರು, ದಿನಾಂಕ: **05/08/2026.**

ಅಧಿಸೂಚನೆ

ಸರ್ಕಾರದ ಅಧಿಸೂಚನೆ ಸಂಖ್ಯೆ: ನಅಇ 110 ಎಂಎಲ್ಆರ್ 2025, ದಿನಾಂಕ: 31-12-2025 ರಲ್ಲಿ ಚಿಕ್ಕಬಳ್ಳಾಪುರ ಜಿಲ್ಲೆಯ ಗೌರಿಬಿದನೂರು ತಾಲ್ಲೂಕು ಅಲ್ಲೀಪುರ ಗ್ರಾಮ ಪಂಚಾಯಿತಿಯನ್ನು ಅಲ್ಲೀಪುರ ಪಟ್ಟಣ ಪಂಚಾಯಿತಿ ಪ್ರದೇಶವೆಂದು ಮತ್ತು ಸರ್ಕಾರದ ಅಧಿಸೂಚನೆ ಸಂಖ್ಯೆ: ನಅಇ 118 ಎಂಎಲ್ಆರ್ 2025, ದಿನಾಂಕ: 29-12-2025 ರಲ್ಲಿ ಚಿಂತಾಮಣಿ ತಾಲ್ಲೂಕು ಕೈವಾರ ಗ್ರಾಮ ಪಂಚಾಯಿತಿ ಮತ್ತು ಮಸ್ತೇನಹಳ್ಳಿ ಗ್ರಾಮ ಪಂಚಾಯಿತಿಗಳನ್ನು ಸೇರಿಸಿ ಕೈವಾರ ಪಟ್ಟಣ ಪಂಚಾಯಿತಿ ಪ್ರದೇಶವೆಂದು ರಚಿಸಲಾಗಿರುತ್ತದೆ.

ಸದರಿ ಗ್ರಾಮ ಪಂಚಾಯಿತಿಗಳ ಚುನಾಯಿತ ಕೌನ್ಸಿಲ್‌ನ ಅವಧಿಯು ಮುಕ್ತಾಯಗೊಂಡಿರುವ ಹಿನ್ನೆಲೆಯಲ್ಲಿ, ಹೊಸ ಚುನಾಯಿತ ಕೌನ್ಸಿಲ್ ಅಸ್ತಿತ್ವಕ್ಕೆ ಬರುವವರೆಗೂ ದಿನನಿತ್ಯದ ಕಾರ್ಯನಿರ್ವಹಣೆಗಾಗಿ ಹಾಗೂ ನಗರ ಸ್ಥಳೀಯ ಸಂಸ್ಥೆಯ ಆಡಳಿತ ಹಿತದೃಷ್ಟಿಯಿಂದ ಕರ್ನಾಟಕ ಪೌರಸಭೆಗಳ ಅಧಿನಿಯಮ 1964ರ ಕಲಂ-389ರಲ್ಲಿ ಪ್ರದತ್ತವಾಗಿರುವ ಅಧಿಕಾರವನ್ನು ಚಲಾಯಿಸಿ ಈ ಕೆಳಕಂಡ ನಗರ ಸ್ಥಳೀಯ ಸಂಸ್ಥೆಗಳಿಗೆ ಆಡಳಿತಾಧಿಕಾರಿಗಳನ್ನು ನೇಮಕ ಮಾಡಿ ಆದೇಶಿಸಿದೆ:

ಕ್ರ. ಸಂ.	ನಗರ ಸ್ಥಳೀಯ ಸಂಸ್ಥೆಗಳು	ಜಾರಿಗೆ ಬರುವ ದಿನಾಂಕದಿಂದ	ಆಡಳಿತಾಧಿಕಾರಿ ವಿವರ
1.	ಅಲ್ಲೀಪುರ ಪಟ್ಟಣ ಪಂಚಾಯಿತಿ	08.02.2026	**ತಹಶೀಲ್ದಾರ್, ಗೌರಿಬಿದನೂರು** ತಾಲ್ಲೂಕು,
2.	ಕೈವಾರ ಪಟ್ಟಣ ಪಂಚಾಯಿತಿ	09.02.2026	**ತಹಶೀಲ್ದಾರ್, ಚಿಂತಾಮಣಿ** ತಾಲ್ಲೂಕು

ಕರ್ನಾಟಕ ರಾಜ್ಯಪಾಲರ ಆಜ್ಞಾನುಸಾರ
ಮತ್ತು ಅವರ ಹೆಸರಿನಲ್ಲಿ,

(ಟಿ.ಮಂಜುನಾಥ)
ಸರ್ಕಾರದ ಅಧೀನ ಕಾರ್ಯದರ್ಶಿ,
ನಗರಾಭಿವೃದ್ಧಿ ಇಲಾಖೆ

ಮುದ್ರಕರು ಹಾಗೂ ಪ್ರಕಾಶಕರು:– ಸಂಕಲನಾಧಿಕಾರಿಗಳು, ಕರ್ನಾಟಕ ರಾಜ್ಯಪತ್ರ, ಸರ್ಕಾರಿ ಕೇಂದ್ರ ಮುದ್ರಣಾಲಯ, ಬೆಂಗಳೂರು

R.N.I. No. KARBIL/2001/47147 POSTAL REGN. No. RNP/KA/BGS/2202/2017-19
Licensed to post without prepayment **WPP No. 297**

P S BASAVARAJU